ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : 65

ಸದಸ್ಯರ ಹೆಸರು : ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರಿಸಬೇಕಾದ ಸಚಿವರು : ಉಪ ಮುಖ್ಯಮಂತ್ರಿಗಳು ಹಾಗೂ ಸಾರಿಗೆ ಸಚಿವರು

ಉತ್ತರಿಸಬೇಕಾದ ದಿನಾಂಕ : 29-01-2021

ಕ್ರ. ಸಂ.	ಪ್ರಶ್ನೆ	ಉತ್ತರ
ಅ)	ಲಾಕ್‌ಡೌನ್ ಸಂದರ್ಭದಲ್ಲಿ ಟ್ಯಾಕ್ಸಿ ಮತ್ತು ಆಟೋ ಚಾಲಕರಿಗೆ ಘೋಷಿಸಲಾದ ಪ್ಯಾಕೇಜ್ ಫಲಾನುಭವಿಗಳಿಗೆ ತಲುಪಿದೆಯೆ?	ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಸಲ್ಲಿಸಿರುವ ಅರ್ಹ ಫಲಾನುಭವಿಗಳ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಲಾಗಿರುತ್ತದೆ.
ಆ)	ಎಷ್ಟು ಫಲಾನುಭವಿಗಳಿಗೆ ತಲುಪಿದೆ? ಒಟ್ಟು ಮೊತ್ತವೆಷ್ಟು? (ವಿವರ ನೀಡುವುದು)	ಸೇವಾ ಸಿಂಧು ವೆಬ್ ಪೋರ್ಟಲ್‌ನಲ್ಲಿ ದಿನಾಂಕ: 31-07-2020ರ ಅಂತ್ಯಕ್ಕೆ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರು ಪರಿಹಾರ ಧನ ಕೋರಿ ಒಟ್ಟು 2,45,852 ಅರ್ಜಿಗಳು ಸ್ವೀಕೃತವಾಗಿರುತ್ತವೆ ಹಾಗೂ ಸಾರಿಗೆ ಇಲಾಖೆಗೆ ಸರ್ಕಾರದಿಂದ ಪರಿಹಾರ ಧನ ವಿತರಿಸುವ ಸಂಬಂಧ **ರೂ.117.51** ಕೋಟಿ ಅನುದಾನವನ್ನು ಬಿಡುಗಡೆಗೊಳಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ **ರೂ.108.15** ಕೋಟಿಗಳನ್ನು ಉಪಯೋಗಿಸಿಕೊಂಡು ಇಲ್ಲಿಯವರೆಗೆ **2,15,612** ಫಲಾನುಭವಿಗಳಿಗೆ ಪರಿಹಾರ ಧನವನ್ನು ವಿತರಿಸಲಾಗಿರುತ್ತದೆ.
ಇ)	ಸರ್ಕಾರ ಸೂಚಿಸಿದ ದಾಖಲೆ ಪತ್ರಗಳು ಕೆಲವು ಟ್ಯಾಕ್ಸಿ ಮತ್ತು ಆಟೋ ಚಾಲಕರ ಬಳಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?	ಕರ್ನಾಟಕ ಸರ್ಕಾರದ ಆದೇಶ ಸಂಖ್ಯೆ: ಟಿಡಿ 121 ಟಿಡಿಒ 2020, ದಿನಾಂಕ: 16-05-2020 ಹಾಗೂ ಮಾರ್ಪಾಡು ಆದೇಶ ದಿನಾಂಕ:29-05-2020ರಲ್ಲಿ ಆಟೋರಿಕ್ಷಾ ಮತ್ತು ಟ್ಯಾಕ್ಸಿ ಚಾಲಕರಿಗೆ ಮಾತ್ರ ಒಮ್ಮೆ ಪರಿಹಾರವಾಗಿ ರೂ.5,000/-ಗಳ ಪರಿಹಾರ ಧನವನ್ನು ಷರತ್ತುಗಳಿಗೊಳಪಟ್ಟು ನೀಡಲು ಮಂಜೂರಾತಿ ನೀಡಿ ಆದೇಶಿಸಲಾಗಿದೆ.
ಈ)	ಬಂದಿದ್ದರೆ, ಅಂತಹ ಚಾಲಕರುಗಳಿಗೆ ಯಾವ ರೀತಿ ಪರಿಹಾರ ನೀಡಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)	ಸದರಿ ಆದೇಶದಲ್ಲಿ ಅರ್ಹ ಟ್ಯಾಕ್ಸಿ ಮತ್ತು ಆಟೋ ಚಾಲಕರನ್ನು ಗುರುತಿಸಿ DBT ಮುಖಾಂತರ ಪರಿಹಾರ ವಿತರಿಸಲು ಅಗತ್ಯವಿರುವ ಕನಿಷ್ಠ ದಾಖಲೆಗಳನ್ನು ನಿಗದಿಪಡಿಸಲಾಗಿರುತ್ತದೆ. ಚಾಲನಾ ಅನುಜ್ಞಾ ಪತ್ರ ಮತ್ತು ಆಧಾರ್ ಕಾರ್ಡಿನ ವಿವರಗಳಲ್ಲಿ ಹೊಂದಾಣಿಕೆಯಿಲ್ಲದ ಕಾರಣ 2507 ಅರ್ಜಿಗಳು ತಿರಸ್ಕೃತವಾಗಿರುತ್ತವೆ. ID validation failed ತಾಂತ್ರಿಕ ಸಮಸ್ಯೆಯಿಂದ / ಫಲಾನುಭವಿಗಳ ಬ್ಯಾಂಕ್ ಖಾತೆಗಳು Inactive ಆಗಿರುವ ಕಾರಣ / ಬ್ಯಾಂಕ್ ಖಾತೆಗಳಿಗೆ ಆಧಾರ್ ಸಂಖ್ಯೆ ಜೋಡಣೆ ಆಗದಿರುವ ಕಾರಣ ನಿಯಮಾವಳಿಯಂತೆ ಪರಿಹಾರ ಧನವನ್ನು ಕೋರಿ ಅರ್ಜಿ ಸಲ್ಲಿಸಿದವರಿಗೆ ಡಿ.ಬಿ.ಟಿ. ಮುಖಾಂತರ ನೇರವಾಗಿ ಜಮೆ ಮಾಡಲು ಸಾಧ್ಯವಾಗಿರುವುದಿಲ್ಲ. ಈ ಸಂಬಂಧ ಹೆಚ್ಚುವರಿ ಬ್ಯಾಂಕ್ ಖಾತೆ ಮಾಹಿತಿಯನ್ನು ದಿನಾಂಕ:25-11-2020 ರೊಳಗಾಗಿ ಸೇವಾಸಿಂಧು ವೆಬ್ ಪೋರ್ಟಲ್‌ನಲ್ಲಿ ದಾಖಲಿಸಲು ಬಾಕಿ ಅರ್ಹ ಫಲಾನುಭವಿಗಳ ಮೊಬೈಲ್ ಸಂಖ್ಯೆಗೆ ಎಸ್.ಎಂ.ಎಸ್. ಮುಖಾಂತರ ಮಾಹಿತಿಯನ್ನು ನೀಡಲಾಗಿರುತ್ತದೆ. ಅದಕ್ಕನುಗುಣವಾಗಿ ಸ್ವೀಕೃತವಾಗಿರುವ ಮಾಹಿತಿಯನ್ನು ಪರಿಶೀಲಿಸಿ ಪರಿಹಾರ ಧನ ವಿತರಿಸುವ ಕ್ರಮ ಚಾಲ್ತಿಯಲ್ಲಿರುತ್ತದೆ.

ಟಿಡಿ 02 ಟಿಡಿಕ್ಯೂ 2021

(ಲಕ್ಷ್ಮಣ ಸಂಗಪ್ಪ ಸವದಿ)
ಉಪ ಮುಖ್ಯಮಂತ್ರಿಗಳು ಹಾಗೂ
ಸಾರಿಗೆ ಸಚಿವರು